RNU AIR DHARWAD

**JULY 08, 2026**

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಕಲ್ಯಾಣ ಕರ್ನಾಟಕ ಭಾಗದಲ್ಲಿ, 1 ಸಾವಿರ** ಕೋಟಿ ರೂಪಾಯಿ ವೆಚ್ಚದಲ್ಲಿ, ಸಾವಿರದ 25 ಕಿಲೋಮೀಟರ ರಸ್ತೆ ಅಭಿವೃದ್ಧಿಪಡಿಸಲಾಗುತ್ತಿದೆ. ಮಾರ್ಚ್ 2027 ರ ವೇಳೆಗೆ ಕಾಮಗಾರಿ ಪೂರ್ಣಗೊಳ್ಳಲಿದೆ. ಪ್ರಗತಿ ಪಥ ಯೋಜನೆಯಡಿ ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ, 30 ಕಿಲೋಮೀಟರಗಳಂತೆ ರಸ್ತೆಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿ ರಾಜ್ ಖಾತೆ ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದರು. ಗುಲಬರ್ಗಾ ವಿಶ್ವವಿದ್ಯಾಲಯದ, ಡಾಕ್ಟರ ಬಿ.ಆರ್.ಅಂಬೇಡ್ಕರ್ ಸಭಾಂಗಣದಲ್ಲಿ, ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಅವರ ಅಧ್ಯಕ್ಷತೆಯಲ್ಲಿ ಆಯೋಜಿತ ಕಲಬುರಗಿ ವಿಭಾಗ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಸಚಿವರು, ನಾಡಿನಾದ್ಯಂತ ಒಟ್ಟು 7 ಸಾವಿರದ 110 ಕಿಲೋಮೀಟರ ಹಳ್ಳಿ ರಸ್ತೆ ಸುಧಾರಣೆಗೆ, ಎ.ಡಿ.ಬಿ. ಬ್ಯಾಂಕಿನಿಂದ 5 ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ಯೋಜನೆ ಕೈಗೆತ್ತಿಕೊಳ್ಳಲಾಗಿದೆ ಎಂದರು.

<><><>

**ವಿಜಯಪುರ ನಗರಕ್ಕೆ ಸಂಪರ್ಕ ಕಲ್ಪಿಸುವ,** 957 ಕೋಟಿ 9 ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಾಣಗೊಳ್ಳುತ್ತಿರುವ ರಾಷ್ಟ್ರೀಯ ಹೆದ್ದಾರಿ, 2027 ಮಾರ್ಚ್ ತಿಂಗಳಲ್ಲಿ ಪೂರ್ಣಗೊಂಡು, ಸಂಚಾರಕ್ಕೆ ಮುಕ್ತವಾಗಲಿದೆ ಎಂದು ಲೋಕಸಭಾ ಸಂಸದ ರಮೇಶ ಜಿಗಜಿಣಗಿ ತಿಳಿಸಿದರು. ನಿರ್ಮಾಣ ಹಂತದಲ್ಲಿರುವ ರಾಷ್ಟ್ರೀಯ ಹೆದ್ದಾರಿ ಕುರಿತು ಅಭಿಯಂತರರ ಜೊತೆ ಮಾತುಕತೆ ನಡೆಸಿ, ಮಾಹಿತಿ ಪಡೆದ ಸಂಸದರು, ಮಹಾರಾಷ್ಟ್ರದ ಮುರುಮ್ ನಿಂದ ವಿಜಯಪುರದ ನೇತಾಜಿ ವೃತ್ತದವರೆಗಿನ ಶೇಕಡ 65 ರಷ್ಟು ರಸ್ತೆ ಕಾಮಗಾರಿ ಪೂರ್ಣಗೊಂಡಿದೆ ಎಂದು ತಿಳಿಸಿದರು.

<><><>

**ರೈತರ ಕಲ್ಯಾಣಕ್ಕೆ ರಾಜ್ಯ ಸರ್ಕಾರ ಬದ್ಧವಾಗಿದೆ.** 2025ನೇ ಸಾಲಿನ ಮುಂಗಾರು ಹಂಗಾಮಿನ ಅತಿವೃಷ್ಟಿಯಲ್ಲಿ, ಕಲಬುರಗಿ ರೈತರ ಬೆಳೆ ಹಾನಿಗೆ ಸಂಬಂಧಿಸಿದಂತೆ, ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ, 585 ಕೋಟಿ 72 ಲಕ್ಷ ರೂಪಾಯಿ ವಿಮಾ ಪರಿಹಾರ ಮೊತ್ತವನ್ನು ಲೆಕ್ಕಾಚಾರ ಮಾಡಲಾಗಿದೆ ಎಂದು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ ಖರ್ಗೆ ತಿಳಿಸಿದ್ದಾರೆ. ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಸಚಿವರು, ಇದುವರೆಗೂ 243 ಕೋಟಿ 44 ಲಕ್ಷ ರೂಪಾಯಿ ಪರಿಹಾರ ಬಿಡುಗಡೆಯಾಗಿದೆ ಎಂದು ತಿಳಿಸಿದ್ದಾರೆ. ಬಾಕಿ ಇರುವ ವಿಮಾ ಪರಿಹಾರವನ್ನು ಶೀಘ್ರದಲ್ಲೇ ರೈತರ ಕೈ ಸೇರುವಂತೆ ಕ್ರಮ ಕೈಗೊಳ್ಳಲಾಗುವುದು ಎಂದರು.

<><><>

**ಮಹಾರಾಷ್ಟ್ರದಲ್ಲಿ ಅಡಿಕೆ ಸಾಗಣೆ ವಾಹನಗಳನ್ನು** ತಡೆದಿರುವುದರಿಂದ, ಲಕ್ಷಾಂತರ ಅಡಿಕೆ ಬೆಳೆಗಾರರು, ಸಹಕಾರಿ ಸಂಸ್ಥೆಗಳು ಹಾಗೂ ವ್ಯಾಪಾರಿಗಳು ಸಂಕಷ್ಟಕ್ಕೆ ಸಿಲುಕಿದ್ದಾರೆ. ಈ ಕುರಿತು ಹೊಸದಿಲ್ಲಿಯಲ್ಲಿ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ಅವರ ಜೊತೆ ಮಾತುಕತೆ ನಡೆಸಲಾಗಿದ್ದು, ಮುಖ್ಯಮಂತ್ರಿಯವರು ಅಡಿಕೆ ಸಾಗಣೆಗೆ ಯಾವುದೇ ರೀತಿ ತೊಂದರೆಯಾಗದಂತೆ ಸೂಕ್ತ ಕ್ರಮ ಕೈಗೊಳ್ಳುವ ಭರವಸೆ ನೀಡಿರುವುದಾಗಿ ಕೇಂದ್ರ ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ಸಭೆಯಲ್ಲಿ ಶಾಸಕ ಅರಗ

ಜ್ಞಾನೇಂದ್ರ, ಸಂಸದರಾದ ಕ್ಯಾಪ್ಟನ್ ಬ್ರಿಜೇಶ್ ಚೌಟ, ಬಿ.ವೈ. ರಾಘವೇಂದ್ರ, ಕೋಟ ಶ್ರೀನಿವಾಸ್ ಪೂಜಾರಿ, ವಿಶ್ವೇಶ್ವರ ಹೆಗಡೆ ಕಾಗೇರಿ ಪಾಲ್ಗೊಂಡಿದ್ದರು.

<><><>

**ಕೊಡಗು ಸೇರಿದಂತೆ, ಕಾವೇರಿ ಜಲಾನಯನ** ಪ್ರದೇಶದಲ್ಲಿ ನಿರಂತರ ಮಳೆ ಆಗುತ್ತಿರುವ ಹಿನ್ನೆಲೆ, ಮಂಡ್ಯ ಜಿಲ್ಲೆ ಕೃಷ್ಣ ರಾಜ ಸಾಗರ ಅಣೆಕಟ್ಟೆಯ ಒಳ ಹರಿವಿನಲ್ಲಿ ಏರಿಕೆ ಕಂಡಿದೆ. ನಿನ್ನೆ 82 ಅಡಿ ಇದ್ದ ಜಲಾಶಯದ ನೀರಿನ ಪ್ರಮಾಣ, ಇಂದು, 84 ಅಡಿ ಗಳಿಗೆ ಏರಿಕೆಯಾಗಿದೆ. ತಮಿಳುನಾಡಿಗೆ ನೀರು ಬಿಡುಗಡೆ ಮಾಡಿಲ್ಲ ಎಂದು ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳು ತಿಳಿಸಿದ್ದಾರೆ.

<><><>

**ಉತ್ತರ ಕರ್ನಾಟಕ ಹಾಗೂ ಮಲೆನಾಡು** ಪ್ರದೇಶ ನೆರೆ ಬಾಧಿತವಾಗಿದ್ದು, ಶೀಘ್ರ ಸಂಬಂಧಪಟ್ಟ ಉಸ್ತುವಾರಿ ಸಚಿವರು ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ, ಜನರ ಸಮಸ್ಯೆಗಳನ್ನು ಆಲಿಸಬೇಕು, ನಾಶ ನಷ್ಟದ ಸಮೀಕ್ಷೆ ನಡೆಸಿ, ಸೂಕ್ತ ಪರಿಹಾರ ಘೋಷಿಸಬೇಕು ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಆಗ್ರಹಿಸಿದ್ದಾರೆ. ಸಾಮಾಜಿಕ ಜಾಲತಾಣದ ಮೂಲಕ ಮಾಹಿತಿ ಹಂಚಿಕೊಂಡಿರುವ ಅವರು, ರಾಜ್ಯದಲ್ಲಿ ಕೃಷ್ಣಾ, ಮಲಪ್ರಭಾ, ತುಂಗಾ, ಭದ್ರಾ ಹಾಗೂ ಹೇಮಾವತಿ ನದಿಗಳು ಅಪಾಯದ ಮಟ್ಟ ಮೀರಿ ಹರಿಯುತ್ತಿವೆ. ಬೆಳಗಾವಿ ಜಿಲ್ಲೆಯ ಕೆಲ ಪ್ರದೇಶಗಳು, ದೇವಾಲಯಗಳು ಜಲಾವೃತಗೊಂಡಿವೆ, ಹಾನಿಗೊಳಗಾದ ಮನೆ ಮಾಲಿಕರಿಗೆ ಹಾಗೂ ರೈತರ ಬೆಳೆ ನಷ್ಟ ಪರಿಹಾರದ ಸಮೀಕ್ಷೆ ನಡೆಸಿ, ಸೂಕ್ತ ಪರಿಹಾರ ವಿತರಿಸುವಂತೆ ಕೋರಿದ್ದಾರೆ.

<><><>

**ಬಳ್ಳಾರಿ ಜಿಲ್ಲಾ ಆಸ್ಪತ್ರೆಯ ತಾಯಿ** ಮತ್ತು ಮಕ್ಕಳ ಆರೋಗ್ಯ ವಿಭಾಗಕ್ಕೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾಕ್ಟರ ಯಲ್ಲಾ ರಮೇಶ ಬಾಬು ಭೇಟಿ ನೀಡಿ, ಪರಿಶೀಲನೆ ನಡೆಸಿದರು. ಗರ್ಭಿಣಿಯರು, ಬಾಣಂತಿಯರು ಮತ್ತು ನವಜಾತ ಶಿಶುಗಳ ಆರೈಕೆ ಹಾಗೂ ಆರೋಗ್ಯದ ಕುರಿತು ವೈದ್ಯರಿಂದ ಮಾಹಿತಿ ಪಡೆದ ಅವರು, ತಾಯಂದಿರ ದೈಹಿಕ ಹಾಗೂ ಮಾನಸಿಕ ಆರೋಗ್ಯದ ಕಡೆ ಹೆಚ್ಚಿನ ಕಾಳಜಿ ವಹಿಸುವಂತೆ ಸೂಚಿಸಿದರು.

<><><>

**ದಾವಣಗೆರೆ ಜಿಲ್ಲಾ ನ್ಯಾಯಾಲಯದ** ಸಂಕೀರ್ಣದ ನೂತನ ಕಟ್ಟಡ, ಕುಂದುವಾಡ ಬಳಿ ನಿರ್ಮಾಣಗೊಳ್ಳುತ್ತಿದ್ದು, ಕಾಮಗಾರಿಯನ್ನು ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರೂ ಪರಿಶೀಲಿಸಿದರು. ಜಿಲ್ಲಾ ನ್ಯಾಯಾಲಯದ ನೂತನ ಕಟ್ಟಡ ಸುಮಾರು, 25 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣಗೊಳ್ಳುತ್ತಿದೆ. ಅಂತಿಮ ಹಂತದ ಕಾಮಗಾರಿ ಪ್ರಗತಿಯಲ್ಲಿದ್ದು, ಕಟ್ಟಡ, ನೆಲ ಮಹಡಿ ಹಾಗೂ 2 ಅಂತಸ್ತುಗಳನ್ನು ಹೊಂದಿರಲಿದೆ ಎಂದರು.

<><><>

**ಹಾಸನದ ಪ್ರಸಿದ್ಧ ಧಾರ್ಮಿಕ ಕ್ಷೇತ್ರ,** ಶ್ರೀ ಹಾಸನಾಂಬಾ ದೇವಿ ಜಾತ್ರಾ ಮಹೋತ್ಸವ ಅಕ್ಟೋಬರ್ ತಿಂಗಳಲ್ಲಿ ನಡೆಯಲಿದೆ. ಭಕ್ತಾದಿಗಳಿಗೆ ಸುರಕ್ಷಿತ ಹಾಗೂ ಸುಗಮ ದರ್ಶನದ ವ್ಯವಸ್ಥೆ ಕಲ್ಪಿಸುವ ನಿಟ್ಟಿನಲ್ಲಿ ಅಗತ್ಯ ಸಿದ್ಧತೆ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಲತಾ ಕುಮಾರಿ ತಿಳಿಸಿದ್ದಾರೆ. ದೇವಿ ದರ್ಶನಕ್ಕೆ ಆಗಮಿಸುವ ಭಕ್ತರ ನಿಖರ ಸಂಖ್ಯೆ ದಾಖಲಿಸಲು ಆಧುನಿಕ ತಂತ್ರಜ್ಞಾನವನ್ನು ಬಳಸಲಾಗುವುದು ಎಂದು ತಿಳಿಸಿದರು.

<><><>

**ರಾಜ್ಯದಲ್ಲಿ ನಡೆಯುತ್ತಿರುವ ಮತದಾರರ** ಪಟ್ಟಿಯ ವಿಶೇ ' ಸಮಗ್ರ ಪರಿ ್ಕರಣೆ –ಎಸ್ಐಆರ್ ಪ್ರಕ್ರಿಯೆ ಸಂಪೂರ್ಣ ಪಾರದರ್ಶಕವಾಗಿದೆ. ಯಾವುದೇ ಅರ್ಹ ಮತದಾರರ ಹಕ್ಕಿಗೆ ಧಕ್ಕೆಯಾಗುವುದಿಲ್ಲ ಎಂದು ಸಂಸದ ಗೋವಿಂದ ಎಂ. ಕಾರಜೋಳ ತಿಳಿಸಿದ್ದಾರೆ. ಚಿತ್ರದುರ್ಗದಲ್ಲಿ ಮಾತನಾಡಿದ ಅವರು, ಮೃತಪಟ್ಟವರು, ವಲಸೆ ಹೋದವರು ಹಾಗೂ ಒಂದಕ್ಕಿಂತ ಹೆಚ್ಚು ಕಡೆ ಹೆಸರು

ಹೊಂದಿರುವ ಮತದಾರರನ್ನು ಗುರುತಿಸಿ ಪರಿಶುದ್ಧ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವುದು, ಎಸ್.ಐ.ಆರ್ ಪ್ರಕ್ರಿಯೆ ಉದ್ದೇಶ ಎಂದು ಹೇಳಿದರು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>